ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್

## ಸಂವಹನ ಮತ್ತು ಸಾಮರ್ಥ್ಯ ಅಭಿವೃದ್ಧಿ ಘಟಕ

ದಿನಾಂಕ :30.01.2014

ಸಂಖ್ಯೆ : ಗ್ರಾಅಪ/ರಾನೀನೈಮಿ/ಎನ್‌ಬಿಎ/ಸಿ.ಇಜ-14/2013-14/542

ರವರಿಗೆ,
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಎಲ್ಲಾ ಜಿಲ್ಲಾಪಂಚಾಯತ್‌ಗಳು.

ಮಾನ್ಯರೆ,

**ವಿಷಯ:** ನಿರ್ಮಲ ಭಾರತ ಅಭಿಯಾನ ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಒಗ್ಗೂಡಿಸುವಿಕೆ ಕಾರ್ಯಕ್ರಮದಡಿಯಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಫಲಾನುಭವಿಗಳ ಮನವೊಲಿಕೆ ಕಾರ್ಯದಲ್ಲಿ ತೊಡಗುವವವರಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ.

**ಉಲ್ಲೇಖ:**
1. ಪತ್ರಸಂಖ್ಯೆ:ಗ್ರಾಅಪ/ರಾನೀನೈಮಿ/ಎನ್‌ಬಿಎ/ಟಿಎಸ್‌ಸಿ/32/2012,ದಿನಾಂಕ:18.10.2012
2. ದಿನಾಂಕ 23.10.2013ರಂದು ನಡೆದ ರಾಜ್ಯ ಮಟ್ಟದದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ನಡಾವಳಿ ಸಂಖ್ಯೆ: ಗ್ರಾ.ಅಪ/42/ಯೋಉಮಾ/2013, ದಿನಾಂಕ: 30.10.2013.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/186/ಯೋಖಾಯೋ/2012,ಬೆಂಗಳೂರು,ದಿನಾಂಕ: 20.1.2014

-----

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ನಿರ್ಮಲ ಭಾರತ ಅಭಿಯಾನದಡಿ ವೈಯಕ್ತಿಕ ಗೃಹ ಶೌಚಾಲಯಗಳನ್ನು ನಿರ್ಮಾಣ ಮಾಡಿಕೊಳ್ಳುವಂತೆ ಪ್ರೇರೇಪಣೆ ಮಾಡುವ ಆಶಾ, ಅಂಗನವಾಡಿ ಕಾರ್ಯಕರ್ತೆಯರಿಗೆ ಪ್ರತಿ ಯಶಸ್ವಿ ಮನವೊಲಿಕೆ ಪ್ರಕರಣಕ್ಕೆ ರೂ.75/-ಗಳನ್ನು ಎನ್.ಬಿ.ಎ ಯೋಜನೆಯ ಐ.ಇ.ಸಿ ಲೆಕ್ಕ ಶೀರ್ಷಿಕೆಯಡಿ ನೀಡುವಂತೆ ಈಗಾಗಲೇ ಉಲ್ಲೇಖ (1)ರಂತೆ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.

ಮುಂದುವರೆಂತೆ ನಿರ್ಮಲ ಭಾರತ ಅಭಿಯಾನ ಮತ್ತು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗಳನ್ನು ಒಗ್ಗೂಡಿಸಿ, ಶೌಚಾಲಯಗಳನ್ನು ನಿರ್ಮಾಣ ಮಾಡಿಕೊಳ್ಳಲು ಗುರುತಿಸಲಾದ ಫಲಾನುಭವಿಗಳ ಯಶಸ್ವಿ ಮನವೊಲಿಸುವ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಸ್ವಚ್ಛತಾ ಧೂತರು, ಭಾರತ್ ನಿರ್ಮಾಣ ಸ್ವಯಂ ಸೇವಕರು ಹಾಗೂ ಸ್ವ-ಸಹಾಯ ಸಂಘಗಳ ಮಹಿಳೆಯರಿಗೆ ಪ್ರತಿ ಯಶಸ್ವಿ ಮನವೊಲಿಕೆ ಪ್ರಕರಣಕ್ಕೆ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ರೂ.75/- ನೀಡುವಂತೆ ಉಲೇಖ (2)ರ ಅನ್ವಯ ಸೂಚಿಸಲಾಗಿದ್ದು, ಅದರಂತೆ ಉಲ್ಲೇಖ (3)ರಂತೆ ಈಗಾಗಲೇ ಸರ್ಕಾರಿ ಆದೇಶ ಹೊರಡಿಸಲಾಗಿರುತ್ತದೆ.

ಆದ್ದರಿಂದ ನಿರ್ಮಲ ಭಾರತ ಅಭಿಯಾನ ಮತ್ತು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗಳನ್ನು ಒಗ್ಗೂಡಿಸಿ,ಫಲಾನುಭವಿಗಳನ್ನು ಪ್ರೇರೇಪಣೆ ಮಾಡಿ, **ವೈಯಕ್ತಿಕ ಶೌಚಾಲಯಗಳನ್ನು ನಿರ್ಮಾಣ ಮಾಡುವ ಪ್ರತಿಯೊಂದು ಯಶಸ್ವಿ ಮನವೊಲಿಕೆ ಪ್ರಕರಣಕ್ಕೆ ಎನ್.ಬಿ.ಎ ಯೋಜನೆಯಡಿ ರೂ.75/- ಹಾಗೂ ಎಂ.ಜಿ.ಎನ್.ಆರ್.ಇ.ಜಿಎ ಯಡಿ ರೂ.75/- ಒಟ್ಟು ರೂ.150/-ಗಳನ್ನು ಮಾರ್ಗಸೂಚಿಯನ್ವಯ ದಿನಾಂಕ 01.01.2014ರಿಂದ ಜಾರಿಗೆ ಬರುವಂತೆ ಪಾವತಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.**

(ಸಹಿ)
ಮಿಷನ್ ನಿರ್ದೇಶಕರು
ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್
ಗ್ರಾ ಅ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು**
1. ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು, ಇವರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
2. ಪ್ರಧಾನ ಕಾರ್ಯದಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
3. ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.
ದೂರವಾಣಿ ಸಂ.22221861-62 : - ಫ್ಯಾಕ್ಸ್ :-22221862 E-mail : wsrdpr@gmail.com .